


ಪದವಿ ಕಾಲೇಜುಗಳು ಉಪನ್ಯಾಸಕರ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ವಿಧಾನಪರಿಷತ್ ಸದಸ್ಯರು ಉನ್ನತ ಶಿಕ್ಷಣ ಸಚಿವರಾದ ಜಿ.ಟಿ. ದೇವೇಗೌಡ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು.



ಕಾರ್ತೀಕ ಮಾಸದ ಅಂಗವಾಗಿ ಮೊದಲ ಸೋಮವಾರ ಮೈಸೂರಿನ ಚಾಮುಂಡಿ ಬೆಟ್ಟದ ನಂದಿ ಮೂರ್ತಿಗೆ ನೂರೊಂದು ದ್ರವ್ಯಗಳಿಂದ ಶಾಸ್ತ್ರೋಕ್ತವಾಗಿ ಮಸ್ತಕಾಭಿಷೇಕ ನೆರವೇರಿಸಲಾಯಿತು.



## ವಾಹನ ಉರುಳಿ ಬಿದ್ದು ಮೂರು ಎತ್ತುಗಳ ಸಾವು

**ದಾಬಸ್‌ಪೇಟೆ:** ಚಾಲಕನ ನಿಯಂತ್ರಣ ತಪ್ಪಿ ಜಾನುವಾರುಗಳ ಸಾಗಣೆ ವಾಹನ ಉರುಳಿ ಬಿದ್ದ ಪರಿಣಾಮ ಮೂರು ಎತ್ತುಗಳು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ರಾಷ್ಟ್ರೀಯ ಹೆದ್ದಾರಿ 4ರ ಕೆಂಗಲ್ ಕೆಂಪೋಹಳ್ಳಿ ಬಳಿ ಮಂಗಳವಾರ ಬೆಳಿಗ್ಗೆ ನಡೆದಿದೆ.

ತುಮಕೂರಿನಿಂದ ಬೆಂಗಳೂರು ಕಡೆಗೆ 407 ವಾಹನದಲ್ಲಿ 7 ಎತ್ತುಗಳನ್ನು ಸಾಗಿಸುತ್ತಿದ್ದಾಗ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಗೆ ವಾಹನ ಉರುಳಿ ಬಿದ್ದಿದೆ. ಈ ವೇಳೆ ಎತ್ತುಗಳು ಒಂದರ ಮೇಲೊಂದು ಬಿದ್ದು, ಗಾಯಗೊಂಡು ಸ್ಥಳದಲ್ಲೇ ಸಾವನ್ನಪ್ಪಿವೆ. ಉಳಿದ ಎತ್ತುಗಳಿಗೆ ತೀವ್ರ ಗಾಯಗಳಾಗಿವೆ. ಸುದ್ದಿ ತಿಳಿದು ಸ್ಥಳಕ್ಕಾಗಮಿಸಿದ ದಾಬಸ್‌ಪೇಟೆ ಠಾಣೆ ಪೊಲೀಸರು ಕ್ರೇನ್ ಸಹಾಯದಿಂದ ವಾಹನವನ್ನು ಮೇಲೆತ್ತಿ ಉಳಿದ ಜಾನುವಾರುಗಳನ್ನು ರಕ್ಷಿಸಿದ್ದಾರೆ.

**ಟ್ರಾಫಿಕ್ ಜಾಮ್:** ರಸ್ತೆಗೆ ಅಡ್ಡಲಾಗಿ ವಾಹನ ಬಿದ್ದ ಪರಿಣಾಮ ಸುಮಾರು ಒಂದು ಗಂಟೆ ಕಾಲ ಟ್ರಾಫಿಕ್ ಜಾಮ್ ಉಂಟಾಗಿತ್ತು. ಸೋಮವಾರ ರಜೆ ಇದ್ದರಿಂದ ರಾಷ್ಟ್ರೀಯ ಹೆದ್ದಾರಿಯಲ್ಲಿ ವಾಹನದಟ್ಟಣೆ ಹೆಚ್ಚಾಗಿಯೇ ಇತ್ತು.

## ಬೆಂಗಾಲ್–ಬೆಂಗಳೂರು ಶಿಲ್ಪಕಲಾ ಪ್ರದರ್ಶನ

**ಬೆಂಗಳೂರು:** ಬೆಂಗಾಲ್ ಸಂಸ್ಕೃತಿಗಳ ಶಿಲ್ಪಕಲಾ ಸೊಬಗು, ರೂಪು ಲಾವಣ್ಯದಿಂದ ನೋಡುಗರ ಮನಸೂರೆಗೊಳ್ಳುತ್ತಿದೆ.

ಕೋಲ್ಕತ್ತಾ ಮೂಲದ 23 ಯುವ ಶಿಲ್ಪಕಲಾವಿದರು, 'ಬೆಂಗಾಲ್ ಮತ್ತು ಬೆಂಗಳೂರು' ಶೀರ್ಷಿಕೆಯಲ್ಲಿ ಶಿಲ್ಪಕಲಾ ಪ್ರದರ್ಶನವನ್ನು ನಗರದ ಚಿತ್ರಕಲಾ ಪರಿಷತ್ತಿನ ಗ್ಯಾಲರಿಯಲ್ಲಿ ನ. 18ರವರೆಗೆ ಆಯೋಜಿಸಿದ್ದಾರೆ.

ಈ ವರ್ಷದ ಶಿಲ್ಪಕಲಾ ಪ್ರದರ್ಶನದಲ್ಲಿ ಒಟ್ಟು 65 ಕೃತಿಗಳಿವೆ. ಇವುಗಳಲ್ಲಿ 32 ಸಮಕಾಲೀನ ಶಿಲ್ಪಗಳು ಮತ್ತು 33 ಸಾಂಪ್ರದಾಯಿಕ ಶಿಲ್ಪಗಳು. ಈ ಬಾರಿಯ ಶಿಲ್ಪಗಳಲ್ಲಿ ಸಾಂಪ್ರದಾಯಿಕ ಶಿಲ್ಪಗಳಾದ ಅರ್ಧನಾರೀಶ್ವರ, ಕಾರ್ತಿಕೇಯ, ದುರ್ಗಾದೇವಿ, ಭೂವರಾಹ ಹೀಗೆ ಅನೇಕ ಕಲಾಕೃತಿಗಳು ಅಲ್ಲಿ ಬಂದವರ ಮನ ಸೆಳೆಯಲು ಸಜ್ಜಾಗಿವೆ.

ಸಮಕಾಲೀನ ಕಲಾಕೃತಿಗಳಲ್ಲಿ ಕೃಷ್ಣ, ಗಣೇಶ ಹೇಗೆ ಹಲವು ದೇವತೆಗಳ ಕಲಾಕೃತಿಗಳನ್ನು ಇಂದಿನ ಮಾಧ್ಯಮ ರೀತಿಯಲ್ಲಿ ವಿಡಂಬನಾತ್ಮಕವಾಗಿ ಕಲೆಗಾರರು ರಚಿಸಿರುವುದು ವಿಶೇಷವಾಗಿ ಆಕರ್ಷಣೆಗೊಂಡಿವೆ.

ಯುವ ಕಲಾವಿದೆ ಮಧುರಿಮಾ ಗುಹಾ ಅವರ ಕಲಾಕೃತಿಯಲ್ಲಿ ಹೆಣ್ಣು ಮರಣ ಒಬ್ಬಳು ಹೂವಿನ ಬಳ್ಳಿ ಹಿಡಿದುಕೊಂಡಿದ್ದು, ಈ ಬಳ್ಳಿಯೊಳಗೆ ಮತ್ತೊಬ್ಬ ಬಾಲೆ ಹೊರಬರಲು ಕಾಯುತ್ತಿರುವ ಚಿತ್ರ ಅಡಗಿದೆ. ಇದು ಖಿನ್ನಮನಸ್ಕನಾಗಿ ತನ್ನ ಆತ್ಮವಿಶ್ವಾಸ ಕಳೆದುಕೊಂಡು ತನ್ನ ಬಾಳಿಗೆ ಅಂತ್ಯ ಹಾಡುತ್ತಿರುವ ಮನುಷ್ಯನ ದಯನೀಯ ಸ್ಥಿತಿಯನ್ನು ಬಿಂಬಿಸುತ್ತದೆ.

ಹೀಗೆ, ಇಂದಿನ ಸ್ಥಿತಿಗತಿ, ದೇವರುಗಳ ರೂಪ, ರಾಧಾಕೃಷ್ಣ ಮೌನ ಸೇರಿದಂತೆ ಹತ್ತಾರು ಕಲಾಕೃತಿಗಳು ಪ್ರದರ್ಶನದಲ್ಲಿ ಸತತ ಎಂಟು ವರ್ಷಗಳಿಂದ ಕೋಲ್ಕತ್ತಾ ಮೂಲದ ಕಲಾವಿದರು ಪ್ರದರ್ಶನ ನೀಡುತ್ತಿದ್ದಾರೆ ಎಂದು ಆಯೋಜಕ ಸುಭದ್ರ ಘೋಷ್ ತಿಳಿಸಿದರು.

ಕಲೆ ಮತ್ತು ಶಿಲ್ಪಕಲೆ ಪ್ರದರ್ಶನಕ್ಕೆ ಕಲಾವಿದೆ ಸೋನು ಮುಲ್–ಚಂದನಿ ಚಾಲನೆ ನೀಡಲಿದ್ದು, ಬೆಳಿಗ್ಗೆ 11ರಿಂದ ಸಂಜೆ 7 ಗಂಟೆವರೆಗೂ ಪ್ರದರ್ಶನ ನಡೆಯಲಿದೆ.

# ದಲಿತರ ದೌರ್ಜನ್ಯ: ವಿಶೇಷ ಕೋರ್ಟ್ ಸ್ಥಾಪನೆಗೆ ಶಿಫಾರಸ್ಸು



**ಬೆಂಗಳೂರು:** ಪರಿಶಿಷ್ಟ ಜಾತಿ, ಪಂಗಡಗಳ ದೌರ್ಜನ್ಯ ಪ್ರಕರಣಗಳ ವಿಚಾರಣೆಗೆ ರಾಜ್ಯದ ಎಲ್ಲ ಜಿಲ್ಲೆಗಳಲ್ಲೂ ಪ್ರತ್ಯೇಕ ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸಬೇಕು ಮತ್ತು ನ್ಯಾಯಾಲಯಗಳಿಗೆ ದೌರ್ಜನ್ಯ ಕುರಿತು ಸಂವೇದನೆಯುಳ್ಳ ಸಮರ್ಥ ನ್ಯಾಯಾಧಿಕಾರಿಗಳನ್ನು ನೇಮಕ ಮಾಡಬೇಕು ಎಂದು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೇಲ್ವಿಚಾರಣೆ ಮತ್ತು ಬಲವರ್ಧನಾ ಸಮಿತಿ ಶಿಫಾರಸ್ಸು ಮಾಡಿದೆ.

ಈ ಸಮಿತಿ 2017ನೇ ಸಾಲಿನ ಕರ್ನಾಟಕ ರಾಜ್ಯ ವರದಿಯನ್ನು ಮಂಗಳವಾರ ಬಿಡುಗಡೆ ಮಾಡಿದ್ದು, ಈ ವರದಿಯಲ್ಲಿ ದೌರ್ಜನ್ಯಗಳ ತ್ವರಿತ ವಿಲೇವಾರಿಗೆ ಎಲ್ಲ ಜಿಲ್ಲೆಗಳಲ್ಲೂ ವಿಶೇಷ ನ್ಯಾಯಾಲಯ ಸ್ಥಾಪಿಸುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿವೆ.

ಜಿಲ್ಲಾ ಮಟ್ಟದಲ್ಲಿ ದೌರ್ಜನ್ಯ ತಡೆ ಸಂಬಂಧ ರಚಿಸಲಾಗಿರುವ ಉಸ್ತುವಾರಿ ಸಮಿತಿ ಸಭೆಯನ್ನು ಸಮರ್ಪಕವಾಗಿ ನಡೆಸದ ಜಿಲ್ಲಾಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆಯೂ ವರದಿಯಲ್ಲಿ ಹೇಳಿದೆ.

ಈ ಸಾಲಿನಲ್ಲಿ ಬೆಂಗಳೂರು ನಗರ, ಚಿಕ್ಕಬಳ್ಳಾಪುರ ಮತ್ತು ರಾಯಚೂರು ಜಿಲ್ಲಾಧಿಕಾರಿಗಳು ಕೇವಲ ಎರಡು ಸಭೆಗಳನ್ನು ಮಾತ್ರ ನಡೆಸಿದ್ದು, ಇವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು. ಜತೆಗೆ ಎಸಿಆರ್ ಅಡಿಯಲ್ಲಿ ವ್ಯತಿರಿಕ್ತ ಟೀಕೆಗಳನ್ನು ದಾಖಲಿಸಬೇಕು ಎಂದು ವರದಿಯಲ್ಲಿ ಶಿಫಾರಸ್ಸು ಮಾಡಲಾಗಿದೆ.

ಪರಿಶಿಷ್ಟ ಜಾತಿ ಪಂಗಡಗಳ ದೌರ್ಜನ್ಯ ತಡೆ ಕಾಯ್ದೆಯ ನಿಯಮ–4 ಮತ್ತು 2011 ಕ್ರಿಮಿನಲ್ ಮೇಲ್ಮನವಿ ಸಂಖ್ಯೆ 959ರಡಿಯಲ್ಲಿ ನಿರ್ಲಕ್ಷ್ಯದಿಂದ ಕಾರ್ಯ ನಿರ್ವಹಿಸುತ್ತಿರುವ ಎಲ್ಲ ಜಿಲ್ಲಾಧಿಕಾರಿಗಳ ವಿರುದ್ಧವೂ ಕಾನೂನು ಕ್ರಮ ಜರುಗಿಸಬೇಕು ಎಂದು ವರದಿಯಲ್ಲಿ ಶಿಫಾರಸ್ಸು ಮಾಡಿ, ಜಿಲ್ಲಾ ಮಟ್ಟದ ಸಮಿತಿ ಸಭೆಗಳು ವರ್ಷದಲ್ಲಿ ನಿಗದಿತ ಅವಧಿಯಲ್ಲಿ ನಡೆಯುವುದನ್ನು ಕಡ್ಡಾಯವಾಗಿ ನಡೆಯುಂತೆಯೂ ಶಿಫಾರಸ್ಸು ಮಾಡಲಾಗಿದೆ.

ಪೊಲೀಸ್ ಠಾಣಾ ಮಟ್ಟದಲ್ಲಿ ದೌರ್ಜನ್ಯ ಪ್ರಕರಣಗಳ ರಾಜೀ ಮಾಡುತ್ತಿರುವ ಪೊಲೀಸ್ ಅಧಿಕಾರಿಗಳನ್ನು ವಜಾಗೊಳಿಸಬೇಕು. ಮತ್ತು ಈ ಪ್ರಕರಣದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳನ್ನು ಹೊಣೆಗಾಗರನ್ನಾಗಿಸಬೇಕು ಎಂದು ವರದಿಯಲ್ಲಿ ಶಿಫಾರಸ್ಸು ಮಾಡಲಾಗಿದೆ.

ಪೊಲೀಸ್ ಠಾಣೆ ಮಟ್ಟದಲ್ಲಿ ನಡೆಸಬೇಕಾಗಿರುವ ದಲಿತ ದಿನವನ್ನು ತಪ್ಪದೆ ಕಾರ್ಯರೂಪಕ್ಕೆ ತಂದು ಪ್ರತಿ ತಿಂಗಳ 2ನೇ ಭಾನುವಾರದಂದು ದೌರ್ಜನ್ಯ ಪ್ರಕರಣಗಳ ಬಗ್ಗೆ ಮಾಹಿತಿ ಪಡೆದು ಸೂಕ್ತ ನ್ಯಾಯ ಒದಗಿಸುವತ್ತಲೂ ಗಮನ ನೀಡಬೇಕು ಎಂದು ವರದಿಯಲ್ಲಿ ಹೇಳಲಾಗಿದೆ.

### ದೌರ್ಜನ್ಯ ಪ್ರಮಾಣ ಹೆಚ್ಚಳ

ಈ ವರದಿಯಲ್ಲಿ ಒಟ್ಟು 15 ಶಿಫಾರಸ್ಸುಗಳನ್ನು ಮಾಡಲಾಗಿದ್ದು, ಈ ಸಾಲಿನಲ್ಲಿ ರಾಜ್ಯದಲ್ಲಿ 2140 ದೌರ್ಜನ್ಯ ಪ್ರಕರಣಗಳು ವರದಿಯಾಗಿದ್ದು, ಕಳೆದ ಸಾಲಿಗಿಂತ ದೌರ್ಜನ್ಯ ಪ್ರಕರಣಗಳು ಶೇ. 11.92ರಷ್ಟು ಹೆಚ್ಚಾಗಿದೆ. ಇದು ಒಳ್ಳೆಯ ಬೆಳವಣಿಗೆ ಅಲ್ಲ ಎಂದು ಆತಂಕ ವ್ಯಕ್ತಪಡಿಸಲಾಗಿದೆ.

ರಾಜ್ಯದಲ್ಲಿ ಪ್ರತಿ ದಿನಕ್ಕೆ ಐದಾರು ದೌರ್ಜನ್ಯ ಪ್ರಕರಣಗಳು ದಾಖಲಾಗುತ್ತಿವೆ. ಐದು ದಿನಕ್ಕೊಂದು ಕೊಲೆ ಅಥವಾ ಕೊಲೆಗೆ ಯತ್ನ ಪ್ರಕರಣ, ಪ್ರತಿ ಎರಡು ದಿನಕ್ಕೊಂದು ಅತ್ಯಾಚಾರ ಪ್ರಕರಣಗಳು ನಡೆದಿವೆ ಎಂದು ವರದಿಯಲ್ಲಿ ಹೇಳಲಾಗಿದೆ.

ದೌರ್ಜನ್ಯ ಕಾಯ್ದೆಯನ್ನು ಸರಿಯಾಗಿ ಅನುಷ್ಠಾನಗೊಳಿಸಿದ್ದರೆ ಇಂತಹ ಪ್ರಕರಣಗಳು ನಡೆಯುತ್ತಿರಲಿಲ್ಲ. ದೌರ್ಜನ್ಯ ತಡೆ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಜಾರಿ ಮಾಡಲು ಕಾಯ್ದೆಯನ್ನು ಸರಿಯಾಗಿ ಅರ್ಥೈಸಿಕೊಂಡಿರುವ ದಕ್ಷ ರೀತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಐಎಎಸ್, ಐಪಿಎಸ್, ಕೆಎಎಸ್ ಮತ್ತು ನ್ಯಾಯಾಧೀಶರನ್ನು ಆಡಳಿತದ ಆಯಾ ಕಟ್ಟಿನ ಸ್ಥಳಗಳಲ್ಲಿ ನೇಮಕ ಮಾಡಬೇಕು ಎಂದು ವರದಿಯಲ್ಲಿ ಹೇಳಲಾಗಿದೆ.

ಈ ಸಾಲಿನಲ್ಲಿ ನ್ಯಾಯಾಲಯದಲ್ಲಿ 1560 ಪ್ರಕರಣಗಳು ಇತ್ಯರ್ಥವಾಗದೆ ಉಳಿದಿದ್ದು, 42 ಪ್ರಕರಣಗಳಲ್ಲಿ ಚುಕ್ಕೆಯಾಗಿದೆ. 983 ಪ್ರಕರಣಗಳು ಖುಲಾಸೆಗೊಂಡಿವೆ ಎಂದು ವರದಿಯಲ್ಲಿ ತಿಳಿಸಲಾಗಿದೆ.

ದೌರ್ಜನ್ಯ ಪ್ರಕರಣಗಳು ರಾಜ್ಯದ ವಿವಿಧ ನ್ಯಾಯಾಲಯಗಳಲ್ಲಿ ಯಾವ ರೀತಿ ವಿಲೇವಾರಿಯಾಗುತ್ತಿವೆ ಮತ್ತು ಅವುಗಳನ್ನು ಸರಿಯಾದ ರೀತಿಯಲ್ಲಿ ವಿಲೇವಾರಿ ಆಗುವಂತೆ ಮಾಡಲು ರಾಜ್ಯ ಮಟ್ಟದಲ್ಲಿ ನೇಮಕಗೊಂಡಿರುವ ಅಡಿಷನ್ ಅಡ್ವೊಕೇಟ್ ಜನರಲ್ ಹುದ್ದೆಯನ್ನು ಖಾಯಂಗೊಳಿಸಿ ಅಧಿಕಾರಿಗೆ ನಿರ್ದಿಷ್ಟವಾದ ಮತ್ತು ಸ್ಪಷ್ಟವಾದ ಜವಾಬ್ದಾರಿ ನೀಡಬೇಕು ಎಂದು ಶಿಫಾರಸ್ಸು ಮಾಡಲಾಗಿದೆ.

**ವರದಿಯ ಅನುಷ್ಠಾನ:** ಬಿಡುಗಡೆ ಮಾಡಿ ಮಾತನಾಡಿದ ಸಮಾಜ ಕಲ್ಯಾಣ ಇಲಾಖೆ ಕಾರ್ಯದರ್ಶಿ ಗಂಗಾರಾಂ ಬಡೇರಿಯಾ, ಈ ವರದಿ ಅನುಷ್ಠಾನಕ್ಕೆ ಸರ್ಕಾರ ಗಮನ ನೀಡಲಿದೆ. ಎಲ್ಲ ಜಿಲ್ಲಾಧಿಕಾರಿಗಳಿಗೂ ಈ ವರದಿಯನ್ನು ಕಳುಹಿಸಲಾಗುವುದು ಎಂದರು.

ಸರ್ಕಾರ ಪರಿಶಿಷ್ಟ ಜಾತಿ ವರ್ಗದ ಸಬಲೀಕರಣಕ್ಕೆ ಹಲವು ಯೋಜನೆಗಳನ್ನು ಜಾರಿಗೊಳಿಸಿದೆ. ಪರಿಶಿಷ್ಟ ಜಾತಿ ವರ್ಗದ ಅಧಿನಿಯಮ ಕಾಯ್ದೆ ಕ್ರಾಂತಿಕಾರಕ ಕಾಯ್ದೆ. ಈ ಕಾಯ್ದೆ ಸಮರ್ಪಕವಾಗಿ ಅನುಷ್ಠಾನಗೊಂಡರೆ ಈ ವರ್ಗಗಳ ಜನರ ಜೀವನ ಸುಧಾರಿಸುತ್ತದೆ. ಈ ವರ್ಷ ಸಮಾಜ ಕಲ್ಯಾಣಕ್ಕೆ 29 ಸಾವಿರ ಕೋಟಿ ರೂ. ಸರ್ಕಾರ ಒದಗಿಸಿದೆ ಎಂದು ಅವರು ಹೇಳಿದರು. ಈ ಸಂದರ್ಭದಲ್ಲಿ ಸಮಿತಿಯ ಸಂಚಾಲಕಿ ಪಿ. ಯಶೋಧ ಸೇರಿದಂತೆ ಹಲವು ದಲಿತ ಮುಖಂಡರು ಉಪಸ್ಥಿತರಿದ್ದರು.

## ಅನ್ನಭಾಗ್ಯದ ಅಕ್ಕಿಗೆ ಕನ್ನ: ಪುರಸಭೆ ಕಾಂಗ್ರೆಸ್ ಸದಸ್ಯನ ಸೆರೆ

**ದಾವಣಗೆರೆ:** ಅನ್ನಭಾಗ್ಯ ಅಕ್ಕಿಯನ್ನು ಅಕ್ರಮವಾಗಿ ಸಾಗಾಟ ಮಾಡುತ್ತಿದ್ದ ಮಲೆಬೆನ್ನೂರು ಪುರಸಭೆ ಕಾಂಗ್ರೆಸ್ ಸದಸ್ಯ ಅಬ್ದುಲ್ ಲತೀಫ್ ಸೇರಿ ನಾಲ್ವರನ್ನು ಮಲೆಬೆನ್ನೂರು ಪೊಲೀಸರು ಬಂಧಿಸಿದ್ದಾರೆ.

ಮಲೆಬೆನ್ನೂರಿನ ಅಬ್ದುಲ್ ಲತೀಫ್, ಸರ್ ಅಲಿ, ರಜಾಕ್, ನಸೀರ್‌ನನ್ನು ಬಂಧಿಸಿ ಅಕ್ರಮವಾಗಿ ಸಾಗಿಸುತ್ತಿದ್ದ 17 ಟನ್ ಅನ್ನಭಾಗ್ಯದ ಅಕ್ಕಿ, ಲಾರಿ ಇನ್ನಿತರ ವಸ್ತುಗಳನ್ನು ಪೊಲೀಸರು ವಶ ಪಡಿಸಿಕೊಂಡಿದ್ದಾರೆ.

ಆರೋಪಿ ಅಬ್ದುಲ್ ಲತೀಫ್ ಮತ್ತು ಆತನ ಸ್ನೇಹಿತರು ಅನ್ನಭಾಗ್ಯ ಯೋಜನೆಯ ಅಕ್ಕಿಯನ್ನು ಅಕ್ರಮವಾಗಿ ಸಾಗಾಟ ಮಾಡುತ್ತಿದ್ದ ಖಚಿತ ಮಾಹಿತಿಯನ್ನು ಆಧರಿಸಿ ಮಲೆಬೆನ್ನೂರು ಪೊಲೀಸರು ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ರಾಜ್ಯ ಸರ್ಕಾರದಿಂದ ಬಡವರಿಗೆ ಸೇರಬೇಕಿದ್ದ ನೂರಾರು ಕ್ವಿಂಟಾಲ್ ಅನ್ನಭಾಗ್ಯದ ಅಕ್ಕಿ ಮಾರಾಟ ದಂಧೆಯನ್ನು ಅಬ್ದುಲ್ ಲತೀಫ್ ಇತರ ಬಂಧಿತ ಆರೋಪಿಗಳು ನಡೆಸುತ್ತಿದ್ದರು. ಕಳವು ಮಾಡಿದ ಅಕ್ಕಿಯನ್ನು ಪಾಲಿಶ್ ಮಾಡಿಸಿ, ನಂತರ ಪ್ಯಾಕೇಟ್ ಮಾಡಿ ಮಾರುಕಟ್ಟೆಯಲ್ಲಿ ಮಾರಾಟ ಮಾಡುತ್ತಿದ್ದರು. ಬಂಧಿತರಿಂದ 17 ಟನ್ ಅನ್ನಭಾಗ್ಯದ ಅಕ್ಕಿ ಹಾಗೂ ಒಂದು ಲಾರಿಯನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಈ ದಾಳಿಯು ಡಿಸಿಪಿ ಇನ್ಸ್‌ಪೆಕ್ಟರ್ ದೇವರಾಜ್ ನೇತೃತ್ವದಲ್ಲಿ ನಡೆದಿದ್ದು, ಆರೋಪಿಗಳನ್ನು ಹೆಚ್ಚಿನ ವಿಚಾರಣೆಗೊಳಪಡಿಸಲಾಗಿದೆ.



ಬೆಂಗಳೂರಿನ ಬಸವನಗುಡಿಯ ನ್ಯಾಷನಲ್ ಕಾಲೇಜು ಮೈದಾನದಲ್ಲಿ ಕೇಂದ್ರ ಸಚಿವ ಅನಂತ್‌ಕುಮಾರ್ ಅವರ ಪಾರ್ಥೀವ ಶರೀರವನ್ನು ಅಂತಿಮ ದರ್ಶನಕ್ಕೆ ಇಡಲಾಗಿತ್ತು. ನೂರಾರು ಶಾಲಾ ಮಕ್ಕಳು ಅಂತಿಮ ನಮನ ಸಲ್ಲಿಸಿದರು.

# ರಾಜ್ಯದ 100 ಬರಪೀಡಿತ ತಾಲೂಕುಗಳಿಗೆ ಶೀಘ್ರ ಕೇಂದ್ರ ಅಧ್ಯಯನ ತಂಡ



**ಬೆಂಗಳೂರು:** ರಾಜ್ಯದಲ್ಲಿನ ಬರ ಪರಿಸ್ಥಿತಿ ಅಧ್ಯಯನಕ್ಕಾಗಿ ಕೇಂದ್ರದ ಅಧ್ಯಯನ ತಂಡ ಶೀಘ್ರ ಭೇಟಿ ನೀಡುವ ನಿರೀಕ್ಷೆ ಇದೆ. ಸಂಪೂರ್ಣ ಪರಿಶೀಲಿಸಿ ರಾಜ್ಯ ಸರ್ಕಾರದೊಂದಿಗೆ ಚರ್ಚಿಸಿ ಈ ತಂಡ ಕೇಂದ್ರ ಸರ್ಕಾರಕ್ಕೆ ವರದಿ ನೀಡಲಿದೆ.

ಮುಂಗಾರು ಹಂಗಾಮಿನಲ್ಲಿ ರಾಜ್ಯದ 100 ತಾಲೂಕುಗಳು ಬರ ಪೀಡಿತವಾಗಿದ್ದು, ತೀವ್ರ ಸಂಕಷ್ಟವನ್ನು ರೈತ ಸಮುದಾಯ ಎದುರಿಸುತ್ತಿದೆ.

ರಾಜ್ಯದಲ್ಲಿ ಸುಮಾರು 16 ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಬೆಳೆ ಹಾನಿಯಾಗಿದೆ. ಬರಪೀಡಿತ ಪ್ರದೇಶಗಳ ಜನರಿಗೆ ಪರಿಹಾರ ಧನ ನೀಡುವಂತೆ ರಾಜ್ಯ ಸರ್ಕಾರ ಇತ್ತೀಚೆಗಷ್ಟೆ ಮನವಿ ಮಾಡಿತ್ತು. ರಾಜ್ಯ ಸರ್ಕಾರದ ಮನವಿಯ ಹಿನ್ನೆಲೆಯಲ್ಲಿ ಬರಪೀಡಿತ ಪ್ರದೇಶಗಳ ವಾಸ್ತವ ಸ್ಥಿತಿ ಅರಿಯಲು ಕೇಂದ್ರ ಸರ್ಕಾರ ಅಧ್ಯಯನ ತಂಡವನ್ನು ಇದೇ ವಾರದಲ್ಲಿ ಕಳುಹಿಸಿಕೊಡಲಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

ಬರಪೀಡಿತ ಪ್ರದೇಶಗಳಿಗೆ 2432 ಕೋಟಿ ರೂ. ಪರಿಹಾರ ನೀಡುವಂತೆ ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿತ್ತು. ಜಿಲ್ಲಾವಾರು ಮತ್ತು ತಾಲೂಕು ವಾರು ಮಳೆ, ಬೆಳೆ ಪರಿಸ್ಥಿತಿ, ಹಾನಿಯ ಪ್ರಮಾಣ ಒಳಗೊಂಡ ಮನವಿ ಪತ್ರವನ್ನು ಕೇಂದ್ರ ಸರ್ಕಾರಕ್ಕೆ ರಾಜ್ಯ ಸಲ್ಲಿಸಿದೆ. ಅಲ್ಲದೆ, ಬೆಳೆ ಪರಿಸ್ಥಿತಿ ಬಗ್ಗೆ ಸಚಿತ್ರ ಸಹಿತ ಮಾಹಿತಿಯನ್ನೂ ಕೂಡ ನೀಡಲಾಗಿದೆ.

ತೀವ್ರ ಬರ ಪರಿಸ್ಥಿತಿ ಇರುವ ಜಿಲ್ಲೆಗಳನ್ನು ಆಯ್ಕೆ ಮಾಡಿ ಕೇಂದ್ರದ ಅಧ್ಯಯನ ತಂಡ ಸ್ಥಳ ಪರಿಶೀಲನೆ ನಡೆಸಿ ಕೇಂದ್ರ ಸರ್ಕಾರಕ್ಕೆ ವರದಿ ನೀಡಿದೆ. ಅಧ್ಯಯನ ತಂಡ ನೀಡುವ ವರದಿಯನ್ನು ಆಧರಿಸಿ ಕೇಂದ್ರ ಸರ್ಕಾರ ಬರಪೀಡಿತ ಪ್ರದೇಶಗಳಿಗೆ ಪರಿಹಾರ ಧನ ಮಂಜೂರು ಮಾಡಲಿದೆ ಎಂದು ತಿಳಿಸಿದೆ.

# ನ. 15ರಿಂದ 18ರವರೆಗೆ ಜಿಕೆವಿಕೆಯಲ್ಲಿ ಕೃಷಿ ಮೇಳ




**ಬೆಂಗಳೂರು:** ಹೊಸ ಆವಿಷ್ಕಾರ ಹಾಗೂ ಕೃಷಿ ಕ್ಷೇತ್ರದ ಹೊಸ ತಂತ್ರಜ್ಞಾನಗಳನ್ನು ರೈತರಿಗೆ ತಲುಪಿಸುವ ನಿಟ್ಟಿನಲ್ಲಿ ಹತ್ತು ಹಲವು ವಿಶೇಷ ಆಕರ್ಷಣೆಗಳೊಂದಿಗೆ ಬೆಂಗಳೂರು ಗಾಂಧಿ ಕೃಷಿ ವಿಶ್ವವಿದ್ಯಾನಿಲಯದ ಆವರಣದಲ್ಲಿ ನ. 15ರಿಂದ 18ರವರೆಗೆ ನಾಲ್ಕು ದಿನಗಳ ಕಾಲ ಕೃಷಿ ಮೇಳ 2018 ಆಯೋಜಿಸಲಾಗಿದೆ.

ಜಿಕೆವಿಕೆಯಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಗಾಂಧಿ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ. ಎಸ್. ರಾಜೇಂದ್ರ ಪ್ರಸಾದ್ ಮಾತನಾಡಿ, ಕೃಷಿ ಇಲಾಖೆ, ಕರ್ನಾಟಕ ಸರ್ಕಾರ ಹಾಗೂ ಕರ್ನಾಟಕ ರಾಜ್ಯ ಜಲಾನಯನ ಅಭಿವೃದ್ಧಿ, ತೋಟಗಾರಿಕೆ, ರೇಷ್ಮೆ, ಅರಣ್ಯ, ಪಶುಸಂಗೋಪನೆ, ಮೀನುಗಾರಿಕೆ, ಕೃಷಿ ಮಾರುಕಟ್ಟೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕರ್ನಾಟಕ ಹಾಲು ಮಹಾಮಂಡಳಿ ಮತ್ತು ಭಾರತೀಯ ತೋಟಗಾರಿಕೆ ಸಂಸ್ಥೆ, ಬೆಂಗಳೂರು ಇವರ ಸಹಯೋಗದಲ್ಲಿ ಕೃಷಿ ಮೇಳ ಏರ್ಪಡಿಸಲಾಗಿದೆ.

ನ. 15ರಂದು ರಾಜ್ಯಪಾಲ ವಜುಬಾಯಿ ವಾಲಾ ಕೃಷಿಮೇಳಕ್ಕೆ ಚಾಲನೆ ನೀಡಲಿದ್ದಾರೆ. ಕೃಷಿ ಸಚಿವ ಶಿವಶಂಕರ ರೆಡ್ಡಿ, ಪಂಚಾಯತ್ ರಾಜ್ ಹಾಗೂ ಗ್ರಾಮೀಣಾಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಸೇರಿ ಪ್ರಮುಖರು ಪಾಲ್ಗೊಳ್ಳಲಿದ್ದಾರೆ. ನ. 16ರಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ಲೋಕೋಪಯೋಗಿ ಸಚಿವ ಹೆಚ್.ಡಿ. ರೇವಣ್ಣ ಹಾಗೂ ನ. 17ರಂದು ಮಾಜಿ ಪ್ರಧಾನಿ ದೇವೇಗೌಡ ಅತ್ಯುತ್ತಮ ರೈತ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಇನ್ನು, ನ. 18ರಂದು ನಡೆಯಲಿರುವ ಸಮಾರೋಪ ಸಮಾರಂಭದಲ್ಲಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಮೇಳದಲ್ಲಿ ರೈತರ ಸಮಸ್ಯೆಗಳಿಗೆ ತಜ್ಞರಿಂದ ಸಲಹೆ, ರೈತರಿಂದ ರೈತರಿಗಾಗಿ ಚರ್ಚಾಗೋಷ್ಠಿ ಆಯೋಜಿಸುವ ಮೂಲಕ ರೈತರ ಸಮಸ್ಯೆಗಳಿಗೆ ಸ್ಥಳದಲ್ಲೇ ಸಲಹೆ ಸೂಚನೆ ನೀಡಲಾಗುತ್ತದೆ. ಜೊತೆಗೆ ಕೃಷಿಗೆ ಪೂರಕವಾದ ಸುಧಾರಿತ ತಳಿಗಳು, ಬೀಜ ಮಾರಾಟ ಸೇರಿದಂತೆ ಕೃಷಿ ಪರಿಕರಗಳ ಹಾಗೂ ಪ್ರಕಟಣೆಗಳ ಮಾರಾಟ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು. ಕೃಷಿ ಮೇಳ ಸುದ್ದಿಗೋಷ್ಠಿಯಲ್ಲಿ ಕೃಷಿ ವಿ.ವಿ. ವಿಸ್ತರಣಾ ನಿರ್ದೇಶಕ ಡಾ. ಎಂ.ಎಸ್. ನಟರಾಜು, ಸಂಶೋಧನಾ ನಿರ್ದೇಶಕ ಡಾ. ವೈ.ಜಿ. ಷಡಕ್ಷರಿ ಹಾಜರಿದ್ದರು.

### ಪ್ರಾತ್ಯಕ್ಷಿಕೆ ಮೂಲಕ ಬೆಳೆಗಳ ಮಾಹಿತಿ; ಆ್ಯಪ್ ಬಿಡುಗಡೆ

ಖುಷ್ಕಿ ಬೇಸಾಯಕ್ಕೆ ಸೂಕ್ತವಾದ ಬೆಳೆ ಪದ್ಧತಿಗಳು, ನೂತನವಾಗಿ ಬಿಡುಗಡೆಯಾದ ವಿವಿಧ ಬೆಳೆ ತಳಿಗಳ ಪ್ರಾತ್ಯಕ್ಷಿಕೆ, ತೋಟಗಾರಿಕೆ ಬೆಳೆಗಳ ಮತ್ತು ನಿಖರ ಕೃಷಿ ಪ್ರಾತ್ಯಕ್ಷಿಕೆ, ಸಮಗ್ರ ಬೇಸಾಯ ಪದ್ಧತಿ ಪ್ರಾತ್ಯಕ್ಷಿಕೆ, ಸಿರಿಧಾನ್ಯಗಳು ಹಾಗೂ ಮಹತ್ವ, ಔಷಧೀಯ ಮತ್ತು ಸುಂಗಧಯುಕ್ತ ಸಸ್ಯಗಳು, ಜಲಾನಯನ ನಿರ್ವಹಣೆ, ಸಾವಯವ ಕೃಷಿ ಪದ್ಧತಿಗಳು, ಸಮಗ್ರ ಪೋಷಕಾಂಶಗಳು ಹಾಗೂ ಪೀಡೆ ನಿರ್ವಹಣೆ ಬಗ್ಗೆ ಮಾಹಿತಿ ನೀಡುವ ಪ್ರಾತ್ಯಕ್ಷಿಕೆ ಇರುತ್ತದೆ.

ಮಣ್ಣು ಪರೀಕ್ಷೆಗನುಗುಣವಾಗಿ ಬೆಳೆ ಸ್ಪಂದನೆ ಪ್ರಾತ್ಯಕ್ಷಿಕೆ, ಹನಿ ಮತ್ತು ತುಂತರು ನೀರಾವರಿ ಪದ್ಧತಿಗಳು, ಮಳೆ ಹಾಗೂ ಮೇಲ್ಛಾವಣಿ ನೀರಿನ ಕೊಯ್ಲು, ಸುಧಾರಿತ ಕೃಷಿ ಯಂತ್ರೋಪಕರಣಗಳ ಪ್ರದರ್ಶನ, ಕೊಯ್ಲಿನೋತ್ತರ ತಾಂತ್ರಿಕತೆ, ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ಮೌಲ್ಯವರ್ಧನೆ, ಬಿತ್ತನೆ ಬೀಜಗಳ ಪರೀಕ್ಷೆ ಹಾಗೂ ಶೇಖರಣೆ ಬಗ್ಗೆ ಪ್ರಾತ್ಯಕ್ಷಿಕೆ ಮೂಲಕ ರೈತರಿಗೆ ಸಮಗ್ರ ಮಾಹಿತಿ ನೀಡಲಾಗುತ್ತದೆ.

ಪಶುಸಂಗೋಪನೆ, ಹೈನುಗಾರಿಕೆ, ಕುರಿ, ಕೋಳಿ ಸಾಕಾಣೆ, ಮಾರುಕಟ್ಟೆ ನೈಪುಣ್ಯತೆ ಮಾಹಿತಿ, ಹವಾಮಾನ ವೈಪರೀತ್ಯ ಕೃಷಿ, ಕೃಷಿಯಲ್ಲಿ ನೂತನ ಮಾಹಿತಿ ತಂತ್ರಜ್ಞಾನ, ಜೈವಿಕ ಹಾಗೂ ನವೀಕರಸಲ್ಪಡುವ ಇಂಧನ ಸೇರಿ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದೆ. ಮೇಳಕ್ಕೆ ಬರುವವರಿಗೆ ಉಚಿತ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ. ಹಾಗೂ ರಿಯಾಯಿತಿ ದರದಲ್ಲಿ ಊಟದ ವ್ಯವಸ್ಥೆ ಮಾಡಲಾಗಿದೆ.

ಕೃಷಿ ಮೇಳದ ಹೆಚ್ಚಿನ ಮಾಹಿತಿಗಾಗಿ ಆ್ಯಪ್ ಅಭಿವೃದ್ಧಿಪಡಿಸಲಾಗಿದೆ. ಪ್ಲೇ ಸ್ಟೋರ್‌ನಲ್ಲಿ ಕೃಷಿ ಮೇಳ 2018 ಎಂದು ಟೈಪ್ ಮಾಡಿ ಡೌನ್ ಲೋಡ್ ಮಾಡಿಕೊಳ್ಳಬಹುದಾಗಿದೆ ಎಂದರು.

# ಹಣಕಾಸಿನ ವ್ಯವಹಾರದಲ್ಲಿ ನಷ್ಟ: ಒಂದೇ ಕುಟುಂಬದ ನಾಲ್ವರ ಆತ್ಮಹತ್ಯೆ

**ಬೆಂಗಳೂರು:** ವಿದ್ಯಾರಣ್ಯಪುರ ದೊಡ್ಡಬೊಮ್ಮಸಂದ್ರದಲ್ಲಿ ಒಂದೇ ಕುಟುಂಬದ ನಾಲ್ವರು ಸಾವನ್ನಪ್ಪಿರುವುದು ಹಣಕಾಸಿನ ವಿಚಾರದಿಂದ ಎನ್ನುವುದು ಪೊಲೀಸರ ತನಿಖೆಯಲ್ಲಿ ಪತ್ತೆಯಾಗಿದೆ.

ಪುತ್ರಿ ಸೋನಿಕಾ(6)ಳನ್ನು ಉಸಿರುಗಟ್ಟಿಸಿ ಕೊಲೆ ಮಾಡಿ ಪೋಷಕರೊಂದಿಗೆ ನಿದ್ದೆ ಮಾತ್ರೆ ಸೇವಿಸಿ ಆತ್ಮಹತ್ಯೆಗೆ ಶರಣಾಗಿರುವ ಸುಧಾರಾಣಿ ಹಣಕಾಸಿನ ವ್ಯವಹಾರ ನಡೆಸುತ್ತಿದ್ದು ಈ ಬಗ್ಗೆ ಪತಿ ಅರ್ಜುನ್ ಹಲವು ಬಾರಿ ಬುದ್ದಿ ಹೇಳಿದರೂ ಆಕೆಯು ವ್ಯವಹಾರವನ್ನು ನಿಲ್ಲಿಸಿರಲಿಲ್ಲ.

ಪತ್ನಿಯ ವರ್ತನೆಯಿಂದ ಬೇಸತ್ತ ಅರ್ಜುನ್ ಆಕೆಯ ವ್ಯವಹಾರಗಳಿಗೆ ತಲೆಹಾಕುವುದನ್ನು ಬಿಟ್ಟು ತಮ್ಮ ಪಾಡಿಗೆ ತಾವು ಮೆಡಿಕಲ್ ಸ್ಟೋರ್ ನಡೆಸಿಕೊಂಡು ಹೋಗುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ನಾಲ್ವರ ಸಾವಿನಲ್ಲಿ ಅರ್ಜುನ್ ಪಾತ್ರವಿಲ್ಲದಿರುವುದು ಪತ್ತೆಯಾಗಿದೆ ಸುಧಾರಾಣಿ ನಿವೇಶನ ಖರೀದಿಸಲು 25 ಲಕ್ಷ ಹಣ ನೀಡಿದ್ದ ವ್ಯಕ್ತಿಯು ಅಪಘಾತದಲ್ಲಿ ಮೃತಪಟ್ಟಿದ್ದು ಆತನ ಕುಟುಂಬದವರ ವಿಚಾರಣೆ ನಡೆಸಲು ಪೊಲೀಸರು ಮುಂದಾಗಿದ್ದಾರೆ.

ಸುಧಾರಾಣಿ ಅವರು ಕೃತ್ಯಕ್ಕೂ ಮುನ್ನ ಬರೆದಿಟ್ಟಿರುವ ಡೆತ್ ನೋಟ್‌ನಲ್ಲಿ ನಾನು ಸುಧಾರಾಣಿ. ನಮ್ಮ ಸಾವಿಗೆ ಬೇರೆ ಯಾರು ಕಾರಣ ಅಲ್ಲ ನಾನೇ ಕಾರಣ. ನನಗೆ ಒಂದು ಮನೆ ತೆಗೆದುಕೊಳ್ಳುವ ಕನಸು ಇತ್ತು. ಹೀಗಿರುವಾಗ ಒಬ್ಬನನ್ನು ನಂಬಿದ್ದೆ. ಅದೇ ನಂಬಿಕೆ ಮೇಲೆ ಆತನಿಗೆ 25 ಲಕ್ಷ ಹಣ ಕೊಟ್ಟಿದ್ದೆ. ಆದರೆ ಆ ವ್ಯಕ್ತಿ ಹಣ ತೆಗೆದುಕೊಂಡು ಹೋಗುತ್ತಿರುವಾಗಲೇ ಅಪಘಾತವಾಗಿ ಸಾವನ್ನಪ್ಪಿದ. ನನ್ನ ಹಣ ಹೋಯ್ತು. ಅಪ್ಪ–ಅಮ್ಮನಿಗೆ ವಿಚಾರ ತಿಳಿಸಿದ್ದೆ. ನಂತರ ಹಣ ವಾಪಸ್ ಸಿಗಬಹುದು ಅಂತ ಸಾಕಷ್ಟು ಪ್ರಯತ್ನಪಟ್ಟೆ. ತುಂಬಾ ಜನರ ಬಳಿ ಕೇಳಿಕೊಂಡಿದ್ದೆ. ಆದರೆ ಪರಿಹಾರ ಸಿಗಲಿಲ್ಲ. ಹಣ ವಾಪಸ್ ಬರುತ್ತೆ ಎನ್ನುವ ನಂಬಿಕೆ ಬರಲಿಲ್ಲ.

ಕೊನೆಗೆ ಅಪ್ಪ–ಅಮ್ಮನ ಜೊತೆ ಮಾತನಾಡಿ ತೀರ್ಮಾನ ಮಾಡಿದ್ವಿ. ಅಪ್ಪ ಅಮ್ಮನಿಗೆ ಶನಿವಾರ ಮಾತ್ರೆ ಕೊಟ್ಟೆ, ಅವರು ಸಾಯುವ ಮೊದಲು ನಾವೇನಾದರು ಸತ್ತಿಲ್ಲಾ ಅಂದರೆ ನಮ್ಮನ್ನು ಕೊಂದುಬಿಡು ಎಂದು ಹೇಳಿದರು. ನಂತರ ಅಪ್ಪ–ಅಮ್ಮ ಮಾತ್ರೆ ಸೇವಿಸಿದ ನಂತರ ನಾನು ಮಗಳನ್ನು ಕರೆದುಕೊಂಡು ಮನೆ ಬೀಗ ಹಾಕಿಕೊಂಡು ಗಂಡನ ಮನೆಗೆ ಹೋಗಿದ್ದೆ ಅಲ್ಲಿ ಅಡುಗೆ ಮಾಡಿಟ್ಟು, ಸಂಜೆ ವಾಪಸ್ ಬಂದೆ. ಅಷ್ಟರಲ್ಲಿ ಅಪ್ಪ–ಅಮ್ಮ ಸತ್ತು ಹೋಗಿದ್ದರು. ನಂತರ ನಾನು ಮೊದಲೇ ತೀರ್ಮಾನ ಮಾಡಿದ ಹಾಗೆ, ಮನೆ ಒಳಗಿನಿಂದ ಬೀಗ ಹಾಕಿ ಮಗಳು ಮೋನಿಕಾಳನ್ನು ಉಸಿರುಗಟ್ಟಿಸಿ ಕೊಂದೆ. ಈವಾಗ ನಾನು ಸಾಯುತ್ತೇನೆ ಎಂದು ಬರೆದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಹಣ ಪಡೆದು ಅಪಘಾತವಾಗಿ ಸಾವನ್ನಪ್ಪಿದ ವ್ಯಕ್ತಿ ಕುಟುಂಬದವರನ್ನು ಪತ್ತೆಹಚ್ಚಲು ಸುಧಾರಾಣಿ ಅವರು ಬಳಸುತ್ತಿದ್ದ ಮೊಬೈಲ್ ವಶಕ್ಕೆ ತೆಗದುಕೊಂಡು ಪರಿಶೀಲನೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.